# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಕನಕಪುರ

## ಸಿಸಿ ನಂ.561/2015

| ಚಾಸಾ | **2** | ಪ್ರಾಸಾ | **3** |
|---|---|---|---|
| ಹೆಸರು | | ಶಿವಮಾದ | |
| ತಂದೆಯ ಹೆಸರು | | ಕಾಡೇಗೌಡ | |
| ವಯಸ್ಸು | | **43** ವರ್ಷಗಳು | |
| ಉದ್ಯೋಗ | | ಖಾಸಗಿ ಕೆಲಸ | |
| ವಿಳಾಸ | | ಚೀಲೂರು ಗ್ರಾಮ ಈಗ ಹಾರೋಹಳ್ಳಿ | |

ದಿನಾಂಕ**.06.03.2026**ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.

**ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ನನಗೆ ಈ ಪ್ರಕರಣದ ಆರೋಪಿ ಗೊತ್ತಿಲ್ಲ. ಚಾಸಾ**-1,** ಚಾಸಾ**-3** ರಿಂದ ಚಾಸಾ**-8** ರವರು ನನಗೆ ಗೊತ್ತಿಲ್ಲ. ಮೃತ ವೇಲನ್ ರವರು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ, ಸಾಕ್ಷಿಯು ಗುರುತಿಸಿದ ದಾಖಲೆಯು ಸ್ಥಳ ಮತ್ತು ಅಮಾನತು ಮಹಜರ್

ಆಗಿದ್ದು ಅದನ್ನು ಈಗಾಗಲೇ ನಿಪಿ-**2** ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-**2(**ಬಿ**)** ಎಂದು ಗುರುತಿಸಲಾಯಿತು.

ನಿಪಿ-**2**ಕ್ಕೆ ನಾನು ಯಾವಾಗ ಸಹಿ ಮಾಡಿರುತ್ತೇನೆ ಎನ್ನುವುದು ನನಗೆ ಗೊತ್ತಿಲ್ಲ. ನಿಪಿ-**2** ಕ್ಕೆ ನಾನು ಪೋಲೀಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ನಿಪಿ-**2**ಕ್ಕೆ ಪೊಲೀಸರು ಯಾವ ವಿಚಾರಕ್ಕೆ ಸಂಬಂಧಿಸಿದಂತೆ ನನ್ನ ಸಹಿ ಪಡೆದಿರುತ್ತಾರೆ ಎನ್ನುವುದು ನನಗೆ ಗೊತ್ತಿಲ್ಲ. ನಿಪಿ-**2**ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-**2**ಕ್ಕೆ ಆ ದಿನ ನನ್ನೊಂದಿಗೆ ಮತ್ತಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಸ್ಥಳ ಪರಿಶೀಲನೆ ಮಾಡಿಲ್ಲ ಮತ್ತು ಯಾವುದೇ ವಾಹನಗಳನ್ನು ಪಂಚನಾಮೆಯ ಮೂಲಕ ಅಮಾನತ್ತು ಪಡಿಸಿಕೊಂಡಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ .

ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ. ಅವರಿಗೆ ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರವರು ಅನುಮತಿ ಕೋರಿದ್ದು, ಅನುಮತಿಯನ್ನು ನೀಡಲಾಯಿತು.

ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-

ಹಾರೋಹಳ್ಳಿ ಪೊಲೀಸ್ ಠಾಣಾ ಸಂಖ್ಯೆ **411/2014**ಕ್ಕೆ ಸಂಬಂಧಿಸಿದಂತೆ ಪೋಲೀಸರು ದಿಃ**30.11.2014** ರಂದು ಘಟನಾ ಸ್ಥಳಕ್ಕೆ ಬಂದು ನಾನು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ**-1** ಮತ್ತು ಚಾಸಾ**-3** ರವರ ಸಮಕ್ಷಮ ಬೆಳಿಗ್ಗೆ **10.45** ರಿಂದ **11.30** ಗಂಟೆಗೆಯ ವರೆಗೆ ಸ್ಥಳ ಪರಿಶೀಲನೆ ಮಾಡಿ ಅಪಘಾತ ಕ್ಕೆ ಒಳಗಾದ ವಾಹನವನ್ನು ಅಮಾನತ್ತು ಪಡಿಸಿಕೊಂಡು ಅದಕ್ಕೆ ಸಂಬಂಧಿಸಿದಂತೆ ಒಂದು ಮಹಜರ್ ನ್ನು ತಯಾರಿಸಿ ಅದರ ವಿಚಾರ ನಮಗೆ ಓದಿ ಹೇಳಿ ಸ್ಥಳದಲ್ಲಿಯೇ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ಈ ಮೇಲಿನ ವಿಚಾರಕ್ಕೆ ಸಂಬಂಧಿಸಿದಂತೆ ನಾನು ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸದರಿ ಹೇಳಿಕೆಯ ಭಾಗವನ್ನು ನಿಪಿ**-9** ಎಂದು ಗುರುತಿಸಲಾಯಿತು.

ಆರೋಪಿ ನನಗೆ ಪರಿಚಯಸ್ಥರು ಎಂದರೆ ಸರಿಯಲ್ಲ. ಆರೋಪಿ ನನಗೆ ಪರಿಚಯಸ್ಥರಿದ್ದ ಕಾರಣಕ್ಕೆ ಆರೋಪಿಯ ತಪ್ಪಿ ನಿಂದಲ್ಲೆ ಅಪಘಾತವಾಗಿರುವ ವಿಚಾರ ನನಗೆ ಗೊತ್ತಿದ್ದರೂ, ಈಗ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ನಿಪಿ**-2** ಮತ್ತು ನಿಪಿ**-9** ರಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದರೂ ನನಗೆ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-</u>

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

<u>ಮರುವಿಚಾರಣೆಃ- ಇಲ್ಲ</u>

**(**ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಢೀಕರಿಸುತ್ತೇನೆ.**)**

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**